ಶ್ರೀ ಚಂದ್ರಶೇಖರ್‌ರಡ್ಡಿ ದೇಶಮುಖ್‌ಮದನ್ (ಸೇಡಂ) :

(ಮಾನ್ಯ ಸದಸ್ಯರು ಗೈರು ಹಾಜರಿ)

ಅಧ್ಯಕ್ಷರು : ವರದಿಗಳನ್ನೊಪ್ಪಿಸಲಾಯಿತು.

ಚುನಾವಣಾ ಪ್ರಸ್ತಾವಗಳು

ಶ್ರೀ ಕೆ.ಎನ್. ನಾಗೇಗೌಡ (ಬೃಹತ್ ನೀರಾವರಿ ಸಚಿವರು)

ಶ್ರೀ ಎಂ.ಸಿ. ನಾಣಯ್ಯ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖಾ ಮಂತ್ರಿಗಳ ಪರವಾಗಿ)

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 265(1)ರ ಅನುಸಾರವಾಗಿ ಈ ಸಭೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹನ್ನೆರಡು ಜನ ಸದಸ್ಯರನ್ನು ಚುನಾಯಿಸಬೇಕು;

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 268(1)ರ ಅನುಸಾರವಾಗಿ ಈ ಸಭೆ ಅಂದಾಜುಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕು;

ಇ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 271(1)ರ ಅನುಸಾರವಾಗಿ ಈ ಸಭೆ ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕು;

ಈ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 272(1)ರ ಅನುಸಾರವಾಗಿ ಈ ಸಭೆ ಹಕ್ಕುಬಾಧ್ಯತಾ ಸಮಿತಿಗೆ ಏಳು ಜನ ಸದಸ್ಯರನ್ನು ಚುನಾಯಿಸಬೇಕು;

ಉ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 277(1)ರ ಅನುಸಾರವಾಗಿ ಈ ಸಭೆ ಅಧೀನ ಶಾಸನ ರಚನಾ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕು;

ಊ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 282(1)ರ ಅನುಸಾರವಾಗಿ ಈ ಸಭೆ ಸರ್ಕಾರಿ ಭರವಸೆಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕು.

ಋ) ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆ ನಿಯಮ 283(1)ರ ಅನುಸಾರವಾಗಿ ಈ ಸಭೆ ಖಾಸಗಿ ಸದಸ್ಯರ ವಿಧೇಯಕಗಳ ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು ಚುನಾಯಿಸಬೇಕು:

ಖೂ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಯಮ 286ರ ಅನುಸಾರವಾಗಿ ಈ ಸಭೆ ಅನುಸೂಚಿತ ಜಾತಿ ಹಾಗೂ ಅನುಸೂಚಿತ ವರ್ಗಗಳ ಕಲ್ಯಾಣ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕು.

ಎ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಮಯ 288ರ ಅನುಸಾರವಾಗಿ ಈ ಸಭೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು ಚುನಾಯಿಸಬೇಕು.

ಏ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 370 (2)ರ ಅನುಸಾರವಾಗಿ ಈ ಸಭೆ ವಸತಿ ಸೌಕರ್ಯಗಳ ಸಮಿತಿಗೆ ಎಂಟು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯ

ಆಲಮಟ್ಟಿ ಡ್ಯಾಂ ಕುರಿತು

ಅಧ್ಯಕ್ಷರು : ಈಗ ಶೂನ್ಯ ವೇಳೆಯಲ್ಲಿ ಪ್ರಸ್ತಾಪ ಮಾಡುವುದಕ್ಕೆ ಕೆಲವರೆಲ್ಲ ಮನವಿಯನ್ನು ಕೊಟ್ಟಿದ್ದೀರಿ. ಮಾನ್ಯ ವಿರೋಧ ಪಕ್ಷದ ನಾಯಕರು, ಶ್ರೀಮಾನ್ ನಂಜೇಗೌಡರು, ಮತ್ತು ಇತರರೆಲ್ಲರು ಆಲಮಟ್ಟಿ ವಿಚಾರದಲ್ಲಿ ಈ ಸಭೆಯ ಗಮನ ಸೆಳೆಯುವುದಕ್ಕೆ ತಕ್ಷಣ ನಾವು ಇದನ್ನು ನಿಲುವಳಿ ಸೂಚನೆಯಲ್ಲಿ ತೆಗೆದುಕೊಳ್ಳಬೇಕೆಂದು ಹೇಳಿದ್ದಾರೆ. ನಮ್ಮ ನಿಯಮಾವಳಿಯ ಪ್ರಕಾರ ನಿಲುವಳಿ ಸೂಚನೆಯನ್ನು ನಾನು ಪ್ರಶ್ನೋತರ ಮುಗಿದ ನಂತರ ತೆಗೆದುಕೊಳ್ಳಬೇಕು. ಆದ್ದರಿಂದ ಶೂನ್ಯವೇಳೆ ಈ ದಿವಸ ಬರುವುದಿಲ್ಲ. ಆದ್ದರಿಂದ ಎಲ್ಲ ಸದಸ್ಯರು ದಯಮಾಡಿ ಸಹಕರಿಸಬೇಕಾಗಿ ಕೇಳಿಕೊಳ್ಳುತ್ತೇನೆ.

ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಅಧ್ಯಕ್ಷರೆ, ಮಾನ್ಯ ವಿರೋಧ ಪಕ್ಷದ ನಾಯಕರಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ, ದಯಮಾಡಿ ಅತ್ಯಂತ ಆಗತ್ಯವಾದ ನಾಲ್ಕೈದು ಪ್ರಸ್ತಾವಗಳು ಇವೆ. ಆದ್ದರಿಂದ ಸದನವನ್ನು ಅರ್ಧ ಗಂಟೆ ಮುಂದಕ್ಕೆ ಹಾಕಿದರೆ.. .....

ಅಧ್ಯಕ್ಷರು : ಮಾನ್ಯ ವಿರೋಧ ಪಕ್ಷದ ನಾಯಕರು ಒಪ್ಪಿಕೊಂಡರು ಕೂಡ ನಾವು ಶೂನ್ಯ ವೇಳೆಯಲ್ಲಿ ಪ್ರಸ್ತಾವ ಮಾಡಿ ಆ ನಂತರ ನಿಲುವಳಿ ಸೂಚನೆಯನ್ನು ತೆಗೆದುಕೊಳ್ಳುವುದಕ್ಕೆ ಬರುವುದಿಲ್ಲ. ಪ್ರಿಲಿಮಿನರಿ ಸಬ್‌ಮಿಶನ್ ಆಗಬೇಕು. ಒಂದು ವೇಳೆ ಬೇಗ ಮುಗಿದರೆ ಆನಂತರ ಬೇಕಾಗಿದ್ದರೆ 10 ನಿಮಿಷ ಅವಕಾಶ ಕೊಡುತ್ತೇನೆ ಬೇಗ ಬೇಗ ಮಾತನಾಡಿ ಮುಗಿಸಬೇಕು.

ಶ್ರೀ ಅರಗ ಜ್ಞಾನೇಂದ್ರ : ಮಾನ್ಯ ಅಧ್ಯಕ್ಷರ, ಕೆ.ಪಿ.ಸಿ ಸೌಕರರ ಮುಷ್ಕರ ಮುಂತಾದವುಗಳನ್ನು ನಾವು ಪ್ರಸ್ತಾಪ ಮಾಡುವುದು ಯೋಗ್ಯವೆಂದು ಗೊತ್ತಾಗುತ್ತಿಲ್ಲ.